“ಚಾಡಿಕೋರ ಸ್ವರ್ಗವನ್ನು ಪ್ರವೇಶಿಸುವುದಿಲ್ಲ.”

ಹುದೈಫ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ಪ್ರವಾದಿಯವರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಹೇಳುವುದನ್ನು ನಾನು ಕೇಳಿದ್ದೇನೆ: “ಚಾಡಿಕೋರ ಸ್ವರ್ಗವನ್ನು ಪ್ರವೇಶಿಸುವುದಿಲ್ಲ.” [صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಜನರ ನಡುವಿನ ಸಂಬಂಧಗಳಿಗೆ ಹುಳಿ ಹಿಂಡಲು ಯಾರು ಒಬ್ಬರ ಮಾತನ್ನು ಇನ್ನೊಬ್ಬರಿಗೆ ತಲುಪಿಸುತ್ತಾರೋ ಅವರು ಶಿಕ್ಷಾರ್ಹರಾಗಿದ್ದು ಸ್ವರ್ಗವನ್ನು ಪ್ರವೇಶಿಸುವುದಿಲ್ಲ.

https://sunnah.global/hadeeth/kn/show/5368